ಲಿಖಿತ ಮೂಲಕ ಉತ್ತರಿಸುವ

# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತೆಂಟನೆಯ ಅಧಿವೇಶನ

## ಗುರುವಾರ, ದಿನಾಂಕ: 18ನೇ ಜುಲೈ, 2019

ದೆಹಲಿ ನಿವಾಸಿ ಆಯುಕ್ತ ಹುದ್ದೆ ಬಗ್ಗೆ

ಡಾ|| ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :-

312 (557) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕರ್ನಾಟಕ ರಾಜ್ಯದ ಪ್ರತಿನಿಧಿಯಾಗಿ ದೆಹಲಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ನಿವಾಸಿ ಆಯುಕ್ತರ ಹುದ್ದೆ ಸೃಷ್ಠಿ ಆಗಿದ್ದು ಯಾವಾಗ; ಇರುವರೆಗೂ ಯಾವ ಯಾವ ಅಧಿಕಾರಿಗಳು ಈ ಹುದ್ದೆಯಲ್ಲಿ ಕಾರ್ಯನಿರ್ವಹಿಸಿದ್ದಾರೆ; ಅವರ ಅಧಿಕಾರದ ಅವಧಿ ತಿಳಿಸುವುದು;

(ಆ) ಆ ಅಧಿಕಾರಿಗಳ ಅವಧಿಯಲಿ ಕರ್ನಾಟಕಕ್ಕೆ ಸಂಬಂಧಿಸಿದಂತೆ ಯಾವ ಯಾವ ಯೋಜನೆಗಳನ್ನು ಕೇಂದ್ರ ಸರ್ಕಾರದ ಜೊತೆ ಸಮಾಲೋಚಿಸಿ ಪರಿಹಾರಗಳನ್ನು ಕಂಡುಕೊಳ್ಳಲಾಗಿದೆ; (ವಿವರಗಳನ್ನು ನೀಡುವುದು)

(ಇ) ಇದುವರೆವಿಗೂ ನಿವಾಸಿ ಆಯುಕ್ತರಾಗಿ ಕರ್ತವ್ಯ ನಿರ್ವಹಿಸಿದ ಅಧಿಕಾರಿಗಳ ಕಾರ್ಯವೈಖರಿ ಬಗ್ಗೆ ಸರ್ಕಾರಕ್ಕೆ ತೃಪ್ತಿ ಇದೆಯೇ? (ಮಾಹಿತಿ ನೀಡುವುದು)